# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002

ಸಂಖ್ಯೆ:BBMP/Addl.Dir/JD North/LP/0051/2014-15 ದಿನಾಂಕ: 07-02-2017

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಸಂಖ್ಯೆ: 76/44/19/14/4, ಚಿಕ್ಕಬೆಳ್ಳಂದೂರು ಗ್ರಾಮ, ವರ್ತೂರು ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ. 149, ಮಹದೇವಪುರ ವಲಯ, ಬೆಂಗಳೂರು, ಇಲ್ಲಿ ನಿರ್ಮಿಸುತ್ತಿರುವ ವಿಂಗ್ – ಎ, ಬಿ ಮತ್ತು ಸಿ ವಸತಿ ಸಮುಚ್ಚಯ ಮತ್ತು ಕ್ಲಬ್‌ಹೌಸ್ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/ JDNORTH/LP/0051/2014-15 ದಿನಾಂಕ: 20-12-2014

2) ತಮ್ಮ ಮನವಿ ಪತ್ರ ದಿನಾಂಕ: 28-11-2016

* * * * * * *

ಆಸ್ತಿ ಸಂಖ್ಯೆ, 76/44/19/14/4, ಚಿಕ್ಕಬೆಳ್ಳಂದೂರು ಗ್ರಾಮ, ವರ್ತೂರು ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ. 149, ಮಹದೇವಪುರ ವಲಯ, ಬೆಂಗಳೂರು, ಇಲ್ಲಿ ತಳ + ನೆಲ + ಮೇಲಿನ 8 ಅಂತಸ್ತುಗಳ 177 ಘಟಕಗಳುಳ್ಳ ವಿಂಗ್ – ಎ, ಬಿ ಮತ್ತು ಸಿ ವಸತಿ ಸಮುಚ್ಚಯ ಕಟ್ಟಡ ಮತ್ತು ತಳ + ನೆಲ + ಮೇಲಿನ 2 ಅಂತಸ್ತುಗಳ ಕ್ಲಬ್‌ಹೌಸ್ ಕಟ್ಟಡ ನಿರ್ಮಿಸಲು ಉಲ್ಲೇಖ (1) ರಂತೆ ಈ ಕಛೇರಿಯಿಂದ ದಿನಾಂಕ: 20-12-2014 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಸದರಿ ವಸತಿ ಸಮುಚ್ಚಯ ಮತ್ತು ಕ್ಲಬ್‌ಹೌಸ್ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ಆರ್.ಸಿ.ಸಿ. ಸ್ಥಂಭಗಳನ್ನು ನಿರ್ಮಿಸಿರುವುದನ್ನು ಪರಿವೀಕ್ಷಿಸಲಾಗಿದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 16-01-2017 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರದ ಸಂಬಂಧ ಶುಲ್ಕ ರೂ. 1,39,000/- ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/00575 ದಿನಾಂಕ: 06-02-2017 ರಂದು ಸಂದಾಯ ಮಾಡಿರುವುದರಿಂದ, ಸದರಿ ವಿಂಗ್ – ಎ, ಬಿ ಮತ್ತು ಸಿ ವಸತಿ ಸಮುಚ್ಚಯ ಮತ್ತು ಕ್ಲಬ್‌ಹೌಸ್ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ನಕ್ಷೆ ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
5. ವಿವಿಧ ಇಲಾಖೆಗಳಿಂದ ನೀಡಲಾಗಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು.
6. ಸದರಿ ಕಟ್ಟಡದಲ್ಲಿ ತಳ + ನೆಲ + ಮೇಲಿನ 4 ಅಂತಸ್ತಿನವರೆಗೆ ಕಟ್ಟಡ ನಿರ್ಮಿಸತಕ್ಕದ್ದು, 5ನೇ ಅಂತಸ್ತಿನಿಂದ ಕಟ್ಟಡ ನಿರ್ಮಾಣ ಮಾಡುವ ಮೊದಲು ಹೆಚ್.ಎ.ಎಲ್.ಇಲಾಖೆಯಿಂದ ಪಡೆದಿರುವ ನಿರಾಕ್ಷೇಪಣಾ ಪತ್ರವನ್ನು ಸಲ್ಲಿಸುವುದು
7. ಉದ್ಯಾನವನ ಹಾಗೂ ಬಯಲು ಜಾಗದ ಶುಲ್ಕವನ್ನು ಪಾವತಿಸುವ ಸಂಬಂಧ ಘನ ಸರ್ವೋಚ್ಚ ನ್ಯಾಯಾಲಯ ಹಾಗೂ ಉಚ್ಚ ನ್ಯಾಯಾಲಯದ ಅಂತಿಮ ಆದೇಶಕ್ಕಾಗಿ ಬದ್ಧರಿರುವುದಾಗಿ ದಿನಾಂಕ: 09-01-2017 ರಂದು ಸಲ್ಲಿಸಿರುವ ಮುಚ್ಚಳಿಕೆ ಪತ್ರದಲ್ಲಿನ ಅಂಶಗಳಿಗೆ ಬದ್ಧರಿರತಕ್ಕದ್ದು

07/02/17

ಜಂಟಿ ನಿರ್ದೇಶಕರು (ನಗರ ಯೋಜನೆ -ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

7/2/17 07/02/17 07/02/17.

ಗೆ,

ಶ್ರೀ ಗೋವಿಂದಚಾರಿ ಮತ್ತು ಶ್ರೀಮತಿ ಕೆ. ರುಕ್ಮಿಣಿ,
ನಂ. 002, ಬ್ಲಾಕ್ 6, ಸನ್‌ಸಿಟಿ ಅಪಾರ್ಟ್‌ಮೆಂಟ್ಸ್,
ಇಬ್ಬಲೂರು, ಸರ್ಜಾಪುರ ಔಟರ್‌ರಿಂಗ್ ರಸ್ತೆ,
ಬೆಂಗಳೂರು – 560102.